# ಕರ್ನಾಟಕ ಸರ್ಕಾರ

**ಸಂಖ್ಯೆ:** ಸಿಆಸುಇ (ಆಸು) 49 ಇಆಸು 2023

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:31-03-2023.

**ತುರ್ತು**

## ಸುತ್ತೋಲೆ

**ವಿಷಯ:** 2023ನೇ ಸಾಲಿನ ರಾಜ್ಯ ಸರ್ಕಾರದ ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನಗಳನ್ನು ಸಲ್ಲಿಸುವ ಅವಧಿಯನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ :** ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ (ಆಸು) 49 ಇಆಸು 2023 ದಿನಾಂಕ: 18-03-2023.

***************

2023ನೇ ಸಾಲಿನ "**ರಾಜ್ಯ ಮಟ್ಟ ಹಾಗೂ ಜಿಲ್ಲಾ ಮಟ್ಟದ "ಸರ್ವೋತ್ತಮ ಸೇವಾ ಪ್ರಶಸ್ತಿ**"ಗೆ ನಾಮನಿರ್ದೇಶನವನ್ನು ಆನ್ಲೈನ್‌ನಲ್ಲಿ ಸಲ್ಲಿಸುವಂತೆ, ಉಲ್ಲೇಖದನ್ವಯ ಸುತ್ತೋಲೆಯನ್ನು ಹೊರಡಿಸಲಾಗಿದ್ದು, ಅದರ ಪ್ರತಿಯನ್ನು ಈಗಾಗಲೇ ಕಳುಹಿಸಿ ಕೊಡಲಾಗಿದೆ.

ಅದರನ್ವಯ ರಾಜ್ಯ ಮಟ್ಟ ಹಾಗೂ ಜಿಲ್ಲಾ ಮಟ್ಟದ "ಸರ್ವೋತ್ತಮ ಸೇವಾ ಪ್ರಶಸ್ತಿ"ಗೆ ನಾಮನಿರ್ದೇಶನವನ್ನು ಸಲ್ಲಿಸುವ ಅವಧಿಯನ್ನು ದಿನಾಂಕ:31-03-2023ರ ವರೆಗೆ ನಿಗಧಿಪಡಿಸಲಾಗಿತ್ತು. ಇನ್ನು ಹೆಚ್ಚಿನ ಸಂಖ್ಯೆಯ ಅಧಿಕಾರಿ/ನೌಕರರು ನಾಮನಿರ್ದೇಶನಗಳನ್ನು ಸಲ್ಲಿಸಲು ಅವಕಾಶ ನೀಡುವ ಉದ್ದೇಶದಿಂದ, ಸದರಿ ಅವಧಿಯನ್ನು **ದಿನಾಂಕ:10-04-2023ರ ವರೆಗೆ ವಿಸ್ತರಿಸಲಾಗಿದೆ.** ನಂತರ ಯಾವುದೇ ಕಾರಣಕ್ಕೂ ಕಾಲಾವಧಿಯನ್ನು ವಿಸ್ತರಿಸಲಾಗುವುದಿಲ್ಲ.

Janaki YR 31/3/23
(ಜಾನಕಿ ವೈ.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಆಸುಇ (ಆಸು-ತರಬೇತಿ ಮತ್ತು ಮಾಹಿತಿ ಹಕ್ಕು ಶಾಖೆ)

**ಇವರಿಗೆ:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರಿಗೆ.
2. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ,
3. ಎಲ್ಲಾ ಜಿಲ್ಲಾಧಿಕಾರಿಯವರಿಗೆ.
4. ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರಿಗೆ.
5. ಕಚೇರಿ ಪ್ರತಿ/ಹೆಚ್ಚುವರಿ ಪ್ರತಿ.

(3–4:) **ಕಛೇರಿ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ.**